ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 012.

ಫ್ಯಾಕ್ಸ್: 080–23461576 ವೆಬ್‌ಸೈಟ್ : http://kea.kar.nic.in ಇ–ಮೇಲ್: keauthority-ka@nic.in

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.54/2014–15 ದಿನಾಂಕ: 08–05–2015

## ಅಧಿಸೂಚನೆ

## ಕರ್ನಾಟಕದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹುದ್ದೆಗಳ ನೇಮಕಾತಿ

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಭರ್ತಿ ಮಾಡಲು ಸರ್ಕಾರವು ತನ್ನ ಅಧಿಸೂಚನೆ ಸಂಖ್ಯೆ ಇಡಿ 39 ಡಿಜಿಓ 2009, ಬೆಂಗಳೂರು, ದಿನಾಂಕ 29–05–2014 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಆಯ್ಕೆ ಪ್ರಾಧಿಕಾರವನ್ನಾಗಿ ನಿಗದಿಪಡಿಸಿದೆ. ಈ ಹಿನ್ನಲೆಯಲ್ಲಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರು ತಮ್ಮ ಪತ್ರ ಸಂಖ್ಯೆ ಪಿಯುಇ/ಸಿಬ್ಬಂದಿ–2/ಉನೇ/187/2013–14 ದಿನಾಂಕ 08–05–2015 ರಲ್ಲಿ ಇವರು ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು "ಕರ್ನಾಟಕ ಸಾಮಾನ್ಯ ಸೇವೆಗಳು (ಪದವಿ ಪೂರ್ವ ಶಿಕ್ಷಣ) (ನೇಮಕಾತಿ) ನಿಯಮಗಳು 2013" ರ ಅನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳ ನೇಮಕಾತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲು ಕೋರಿರುತ್ತಾರೆ.

ಅಭ್ಯರ್ಥಿಗಳು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

**ಉಪನ್ಯಾಸಕರ ಹುದ್ದೆಗಳ ನೇಮಕಾತಿಯನ್ನು ಈ ಕೆಳಕಂಡ ವಿಷಯಗಳಿಗೆ ನಡೆಸಲಾಗುವುದು.**

ಕನ್ನಡ, ಇಂಗ್ಲೀಷ್, ಹಿಂದಿ, ತೆಲುಗು, ಮರಾಠಿ, ಉರ್ದು, ಸಂಸ್ಕೃತ, ಇತಿಹಾಸ, ಅರ್ಥಶಾಸ್ತ್ರ, ತರ್ಕಶಾಸ್ತ್ರ, ಭೂಗೋಳಶಾಸ್ತ್ರ, ಹಿಂದೂಸ್ತಾನಿ ಸಂಗೀತ, ಕರ್ನಾಟಕ ಸಂಗೀತ, ವ್ಯವಹಾರ ಅಧ್ಯಯನ, ಸಮಾಜ ಶಾಸ್ತ್ರ, ರಾಜ್ಯಶಾಸ್ತ್ರ, ಸಂಖ್ಯಾ ಶಾಸ್ತ್ರ, ಮನಃಶಾಸ್ತ್ರ, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ, ಜೀವಶಾಸ್ತ್ರ, ಗಣಕವಿಜ್ಞಾನ ಮತ್ತು ಶಿಕ್ಷಣ

**ವೇತನ ಶ್ರೇಣಿ:** ರೂ.22,800/– ರಿಂದ ರೂ.43,200/–

**ಒಟ್ಟು ಹುದ್ದೆಗಳು: 1130–ಬ್ಯಾಕ್‌ಲಾಗ್–01**

ಖಾಲಿ ಇರುವ ಪ್ರವರ್ಗವಾರು ಮತ್ತು ವಿಷಯವಾರು ಹುದ್ದೆಗಳ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ನಲ್ಲಿ ನೀಡಲಾಗಿದೆ. ಹಾಗೂ ಕರ್ನಾಟಕ ರಾಜ್ಯಪತ್ರ (ಗೆಜೆಟ್) ದಲ್ಲಿಯೂ ಸಹ ಪ್ರಕಟಿಸಲಾಗಿದೆ.

**ವಯೋಮಿತಿ:** ಅರ್ಜಿಗಳನ್ನು /ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 21 ವರ್ಷಗಳು ತುಂಬಿರತಕ್ಕದ್ದು ಹಾಗೂ ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು;

**(1)** ಪರಿಶಿಷ್ಟಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಾಗಿದ್ದಲ್ಲಿ 45 ವರ್ಷಗಳು

**(2)** ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ–2ಎ / 2ಬಿ / 3ಎ / 3ಬಿ ಗೆ ಸೇರಿದ ಅಭ್ಯರ್ಥಿಗಳಾಗಿದ್ದಲ್ಲಿ 43 ವರ್ಷಗಳು

**(3)** ಇತರೆ ಅಭ್ಯರ್ಥಿಗಳಾಗಿದ್ದಲ್ಲಿ 40 ವರ್ಷಗಳು

ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಮಾಜಿ ಸೈನಿಕರು, ಈಗಾಗಲೇ ಸರ್ಕಾರಿ ಸೇವೆಯಲ್ಲಿ ಇರುವ ಅಭ್ಯರ್ಥಿಗಳು, ವಿಧವೆಯರು ವರ್ಗದ ಅಭ್ಯರ್ಥಿಗಳಿಗೆ ಐದು ವರ್ಷಗಳಷ್ಟು ಹೆಚ್ಚಿಸಲಾಗುವುದು. ವಿಕಲಚೇತನ ಅಭ್ಯರ್ಥಿಗಳಿಗೆ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಅಧಿನಿಯಮ (3)ರ ನಿಯಮ 6ರಲ್ಲಿ ನಿಗದಿಪಡಿಸಿರುವಂತೆ ಹತ್ತು ವರ್ಷಗಳಷ್ಟು ವಯೋಮಿತಿಯನ್ನು ಹೆಚ್ಚಿಸಲಾಗುವುದು.

**ಶೈಕ್ಷಣಿಕ ಅರ್ಹತೆ:** **(ಎ)** ಅಭ್ಯರ್ಥಿಯು ಸಂಬಂಧಿಸಿದ ವಿಷಯದಲ್ಲಿ ಸ್ನಾತಕೋತ್ತರ ಪದವಿಯನ್ನು ದ್ವಿತೀಯ ದರ್ಜೆಯಲ್ಲಿ ಕನಿಷ್ಠ ಶೇಕಡ 55ರಷ್ಟು ಅಂಕಗಳನ್ನು ಅಥವಾ ತತ್ಸಮಾನ ಶ್ರೇಣಿಯನ್ನು ಪಡೆದು ತೇರ್ಗಡೆ ಹೊಂದಿರಬೇಕು, ಮತ್ತು **(ಬಿ)** ಅಭ್ಯರ್ಥಿಯು ಬಿ.ಇಡಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

**ಅರ್ಜಿ ಸಲ್ಲಿಸುವ ವಿಧಾನ:** ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ನಲ್ಲಿ ತೋರಿಸಿರುವ **"Lecturers Recruitment - 2015"** ಲಿಂಕ್ ಅನ್ನು ಆಯ್ಕೆ ಮಾಡಿ ಆನ್ ಲೈನ್ ಮುಖಾಂತರ ಅರ್ಜಿಯನ್ನು ಭರ್ತಿಮಾಡಬೇಕು. ಪೆನ್ ಮತ್ತು ಪೇಪರ್ ಉಪಯೋಗಿಸಿ ಅರ್ಜಿಯನ್ನು ಸಲ್ಲಿಸುವ ವಿಧಾನ ಇರುವುದಿಲ್ಲ.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **16–05–2015** |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **15–06–2015** |
| ಪೋಸ್ಟ್ ಆಫೀಸ್‌ನಲ್ಲಿ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **17–06–2015** |
| ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಳ್ಳುವ ದಿನಾಂಕ | **ನಂತರ ತಿಳಿಸಲಾಗುವುದು** |

**ಪರೀಕ್ಷೆ ಶುಲ್ಕ:** ಸ್ಪರ್ಧಾತ್ಮಕ ಪರೀಕ್ಷೆಯ ಶುಲ್ಕದ ವಿವರಗಳು ಈ ಕೆಳಗಿನಂತಿದೆ.

| **ವಿವರಗಳು** | **ಶುಲ್ಕ** | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು | ರೂ.2,500/– | ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ | ರೂ.2,000/– | |
| ವಿಕಲಚೇತನರಿಗೆ | ಶುಲ್ಕ ವಿನಾಯತಿ ಇದೆ. | |

**ಸೂಚನೆ:** ಶುಲ್ಕವನ್ನು ಕಂಪ್ಯೂಟರೈಸ್ಡ್ ಅಂಚೆ ಕಚೇರಿಗಳಲ್ಲಿ ಮಾತ್ರ ಪಾವತಿಸಬೇಕು.

**(1)** ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿಯನ್ನು ಶುಲ್ಕದೊಂದಿಗೆ (ಅನ್ವಯಿಸಿದ್ದಲ್ಲಿ) ಸಲ್ಲಿಸತಕ್ಕದ್ದು.

**(2)** ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುತ್ತಿದ್ದಲ್ಲಿ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸಬೇಕು.

**ಸ್ಪರ್ಧಾತ್ಮಕ ಪರೀಕ್ಷೆಯ ವೇಳಾಪಟ್ಟಿ : ಸ್ಪರ್ಧಾತ್ಮಕ ಪರೀಕ್ಷಾ ವೇಳಾಪಟ್ಟಿಯನ್ನು ಕೆಇಎ ವೆಬ್ ಸೈಟ್ http://kea.kar.nic.in ನಲ್ಲಿ ನಂತರ ಪ್ರಕಟಿಸಲಾಗುತ್ತದೆ.**

**ಪರೀಕ್ಷಾ ಕೇಂದ್ರಗಳು :** ಪರೀಕ್ಷೆಯನ್ನು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಸಲಾಗುತ್ತದೆ.

**ಉಪನ್ಯಾಸಕರ ಹುದ್ದೆಗಳಿಗೆ ಸಂಬಂಧಿಸಿದಂತೆ ಆಯಾ ವಿಷಯಗಳಿಗೆ ಅಗತ್ಯ ಅರ್ಹತೆ ವಿವರ, ಸ್ಪರ್ಧಾತ್ಮಕ ಪರೀಕ್ಷೆಯ ವಿಷಯಗಳು, ವಿಷಯಗಳ ವಿವರ ಮತ್ತು ಸಮಾನಾಂತರ ಶಿಕ್ಷಣಾರ್ಹತೆ, ಆಯ್ಕೆ ಪ್ರಕ್ರಿಯೆ ಮತ್ತು ನೇಮಕಾತಿಯ ವಿವರ ಹಾಗೂ ಪ್ರವರ್ಗವಾರು ಮತ್ತು ವಿಷಯವಾರು ಹುದ್ದೆಗಳ ವಿವರಗಳನ್ನು ಕೆಇಎ ವೆಬ್ ಸೈಟ್ http://kea.kar.nic.in ಗೆ ಭೇಟಿ ನೀಡಲು ಹಾಗೂ ಕರ್ನಾಟಕ ರಾಜ್ಯ ಪತ್ರ (ಗೆಜೆಟ್) ವನ್ನು ನೋಡಲು ಕೋರಿದೆ.**

**ಸಹಿ/– ಸುಷಮಾ ಗೋಡಬೋಲೆ, ಭಾ.ಆ.ಸೇ.,**
**ಕಾರ್ಯನಿರ್ವಾಹಕ ನಿರ್ದೇಶಕರು**